ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 23.10.2024.

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ ಜಿ.ಬಿ.ಕೆ. ವಕೀಲರಿಂದಃ

ಇಂದು ನಾನು ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ದೃಢಿಕೃತ ನಕಲಿನ ದಾನಪತ್ರವನ್ನು ನಿಪಿ-9 ಎಂದು, ಮ್ಯೂಟೇಷನ್‌ನ್ನು ನಿಪಿ-10 ಎಂದು, ಎರಡು ಗಣಕೀಕೃತ ಪಹಣಿಗಳನ್ನು ಕ್ರಮವಾಗಿ ನಿಪಿ-11 ಮತ್ತು ನಿಪಿ-12 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿ ಪರ ಶ್ರೀ ಎಸ್.ಎಸ್.ಸಿ. ವಕೀಲರಿಂದಃ

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**